ಇ) ಇಲ್ಲ.

ಈ) ಪ್ರಶ್ನೆ ಉದ್ಭವಿಸುವುದಿಲ್ಲ.

ಉ) ಪ್ರಶ್ನೆ ಉದ್ಭವಿಸುವುದಿಲ್ಲ.

ಜಿಲ್ಲಾ, ತಾಲ್ಲೂಕು ಮತ್ತು ಗ್ರಾಮ ಪಂಚಾಯತಿಯಲ್ಲಿ ಅವ್ಯವಹಾರಗಳು

707 (779) ಶ್ರೀ ಗುರುಸ್ವಾಮಿ ಎ.ಎಸ್.(ಚಾಮುಂಡೇಶ್ವರಿ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ರಾಜ್ಯದಲ್ಲಿ ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ಮತ್ತು ಗ್ರಾಮ ಪಂಚಾಯತ್ ನಿಯಮದ ಪ್ರಕಾರ ಪಂಚಾಯತ್ ಸದಸ್ಯರು ಕಾಮಗಾರಿ ನಿರ್ವಹಿಸುತಿಲ್ಲ ಆದರೆ ಈ ಪದಾಧಿಕಾರಿಗಳು ತಮ್ಮ ಬಂಧು ಬಾಂದವರು ಸ್ನೇಹಿತರ ಹೆಸರಿನಲ್ಲಿ ಕಾಮಗಾರಿ ನಡೆಸುತ್ತಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ? ಹೌದಾದರೆ ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

2. ಈ ನಿಯಮ ಉಲ್ಲಂಘನೆಯ ಎಷ್ಟು ಪ್ರಕರಣಗಳು ಸರಕಾರದ ಗಮನಕ್ಕೆ ಬಂದಿವೆ? ಎಷ್ಟು ಜನರನ್ನು ಅನರ್ಹಗೊಲಿಸಲಾಗಿದೆ? (ಮೈಸೂರು ತಾಲ್ಲೂಕಿಗೆ ಸಂಬಂಧಪಟ್ಟಂತೆ ವಿವರ ನೀಡುವುದು)

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರು):

1. ಕರ್ನಾಟಕ ಪಂ. ರಾಜ್ ಅಧಿನಿಯಮ 1993 ರ ಪ್ರಕರಣ 12 (ಹೆಚ್.), 128 (ಐ) ಮತ್ತು 163(ಹೆಚ್.) ರನ್ವಯ ಗ್ರಾಮ ಪಂಚಾಯತಿ, ತಾಲ್ಲೂಕು ಪಂಚಾಯತಿ ಹಾಗೂ ಜಿಲ್ಲಾ ಪಂಚಾಯತಿ ಸದಸ್ಯರು ಪ್ರತ್ಯಕ್ಷನಾಗಿ ಅಥವಾ ಪರೋಕ್ಷವಾಗಿ ಸದರಿ ಪಂಚಾಯತಿಗೆ ಸಂಬಂಧಿಸಿದ ಕಾಮಗಾರಿಯನ್ನು ಗುತ್ತಿಗೆ ಮೂಲಕ ನಿರ್ವಹಿಸುವುದನ್ನು ನಿಷೇಧಿಸಲಾಗಿರುತ್ತದೆ. ಬಂಧು ಬಾಂದವರ ಹೆಸರಿನಲ್ಲಿ ನಡೆಸುತ್ತಿರುವ ಕಾಮಗಾರಿ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. ಅಲ್ಲದೆ, ರೂ. 1.00ಲಕ್ಷಕ್ಕೂ ಹೆಚ್ಚಿನ ಅಂದಾಜು ವೆಚ್ಚದ ಕಾಮಗಾರಿಗಳನ್ನು (ಶಾಲಾ ಕೊಠಡಿಗಳು ಮತ್ತು ಕಿರು ನೀರು ಸರಬರಾಜು ಯೋಜನೆಗಳ ವಿಷಯದಲ್ಲಿ ರೂ 2ಲಕ್ಷ) ಬಹಿರಂಗ ಟೆಂಡರು ಕರೆದು ಗುತ್ತಿಗೆದಾರರ ಮೂಲಕವೇ ಮಾಡಿಸಬೇಕಾಗಿದೆ.

2. ಉದ್ಭವಿಸುವುದಿಲ್ಲ, ಮೈಸೂರು ತಾಲ್ಲೂಕಿಗೆ ಸಂಬಂಧಿಸಿದಂತೆ ಸದಸ್ಯರುಗಳನ್ನು ಅನರ್ಹತೆಗೊಳಿಸಿರುವ ಪ್ರಕರಣಗಳು ಯಾವುದೂ ಇರುವುದಿಲ್ಲ.

ಉಡುಪಿ ಜಿಲ್ಲೆಯ ಸಾರ್ವಜನಿಕ ಇಲಾಖೆಯ ಉಪ.ನಿರ್ದೇಶಕರನ್ನು ಬದಲಾವಣೆ ಮಾಡುತ್ತಿರುವುದು

708 (796) ಶ್ರೀ ಶ್ರೀನಿವಾಸ ಶೆಟ್ಟಿ (ಕುಂದಾಪುರ ಕ್ಷೇತ್ರ): ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

1. ಉಡುಪಿ ಜಿಲ್ಲೆಯ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರನ್ನು ಕಳೆದ ಆರು ತಿಂಗಳಲ್ಲಿ ಎಷ್ಟು ಜನರನ್ನು ಬದಲಾಯಿಸಲಾಗಿದೆ.

2. ಈ ರೀತಿ ಬದಲಾವಣೆ ಮಾಡಲು ಕಾರಣವೇನು?